ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ,
ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **: 21/2024**

ಚಾ.ಸಾ. **:- 04**
ಪ್ರಾ.ಸಾ. **:- 02**

| | | |
|---|---|---|
| ಹೆಸರು | : | ರಾಕೇಶ್.ಕೆ.ಪಿ |
| ತಂದೆಯ ಹೆಸರು | : | ಬೋರೇಗೌಡ |
| ವಯಸ್ಸು | : | 30 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಕೆನ್ನಾಳು ಗ್ರಾಮ. |

ಪ್ರಮಾಣೀಕರಿಸಲಾದ ದಿನಾಂಕಃ- **18.08.2026.**

ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :

ಚಾ.ಸಾ-2 ಹಾಗೂ 5 ರವರು ಪರಿಚಯ. ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಪೊಲೀಸರು ಅಪಘಾತಕ್ಕೆ ಸಂಬಂಧಿಸಿದಂತೆ ಸ್ಥಳ ಮಹಜರ್ ಮಾಡಿರುತ್ತಾರೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-2 ಎಂದು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ನನ್ನ ಜೊತೆ ಬೇರೆ ಸಾಕ್ಷಿಗಳು ಸಹ ಹಾಜರಿದ್ದರು. ಸದರಿ ಮಹಜರ್ ನಲ್ಲಿ ಪೊಲೀಸರು ಕೃತ್ಯ ಸ್ಥಳದ ಕಚ್ಚಾ ನಕಾಶೆಯನ್ನು ತಯಾರು ಮಾಡಿರುತ್ತಾರೆ. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದ ಬಳಿ ಮಾಡಿರುತ್ತೇನೆ. ಮಹಜರ್ ಸಮಯದಲ್ಲಿ ಪೊಲೀಸರು ಫೋಟೋ ತೆಗೆದಿದ್ದು ಅದರಲ್ಲಿ ನನ್ನ ಮತ್ತು ಉಳಿದ ಸಾಕ್ಷಿದಾರರ ಭಾವಚಿತ್ರ ಇರುತ್ತದೆ. ಸದರಿ ಫೋಟೋವನ್ನು ಈಗ ನಿಪಿ-3 ಎಂದು ಗುರುತಿಸಲಾಗಿದೆ.

ಅದೇ ದಿನ ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತಕ್ಕೆ ಸಂಬಂಧಿಸಿದಂತೆ 2 ವಾಹನಗಳನ್ನು ಪಂಚರ ಸಮಕ್ಷಮ ಮಹಜರ್ ಬರೆದು ಅಮಾನತ್ತುಪಡಿಸಿಕೊಂಡಿರುತ್ತಾರೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-4 ಎಂದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಕಾರಿನ 2 ಫೋಟೋಗಳನ್ನು ಈಗ ನೋಡುತ್ತಿದ್ದು ಅವುಗಳನ್ನು ಒಟ್ಟಾಗಿ ನಿಪಿ-5 ಎಂದು ಗುರುತಿಸಲಾಯಿತು. ದ್ವಿಚಕ್ರ ವಾಹನದ 2 ಫೋಟೋಗಳನ್ನು ಈಗ ನೋಡುತ್ತಿದ್ದು ಅವುಗಳನ್ನು ಒಟ್ಟಾಗಿ ನಿಪಿ-6 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>

ಪ್ರಾ.ಸಾ-2 ರವರು ನನಗೆ ಆ ದಿನ ದೂರವಾಣಿ ಕರೆ ಮಾಡಿ ಕರೆದಿದ್ದರು. ಪೊಲೀಸರು ಮಹಜರ್ ಗೆ ಬರಬೇಕೆಂದು ನೋಟೀಸ್ ಕೊಟ್ಟಿದ್ದರು. ನಾನು ನಿಪಿ-2 ಕ್ಕೆ ಸಹಿಯನ್ನು ಪೊಲೀಸ್ ಠಾಣೆಯ ಬಳಿ ಮಾಡಿರುತ್ತೇನೆ ಎಂದರೆ ಸುಳ್ಳು.

ನಿಪಿ-4 ರ ಮಹಜರನ್ನು ಠಾಣೆಯಲ್ಲಿ ಮಾಡಿರುತ್ತಾರೆ ಎಂದರೆ ಸರಿ. ಮೃತರ ಕುಟುಂಬದವರು ನನಗೆ ಪರಿಚಯವಿರುವ ಕಾರಣ ಅವರಿಗೆ ವಿಮೆ ಪರಿಹಾರ ಕೊಡಿಸಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ :- ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

**ಸಾಕ್ಷಿದಾರರ ಸಹಿ.**